ಕರ್ನಾಟಕ ಸರ್ಕಾರ

ಡಿಸೆಂಬರ್ 14, 2016

## ಹೆಚ್. ವೈ. ಮೇಟಿ ವಿರುದ್ಧ ರಾಸಲೀಲೆ ಆರೋಪದ ಸಿ ಡಿ ಪ್ರಕರಣ ಸಿ ಐ ಡಿ ತನಿಖೆಗೆ : ಸಿದ್ದರಾಮಯ್ಯ

**ಬೆಂಗಳೂರು, ಡಿಸೆಂಬರ್ 14:**

ಅಬಕಾರಿ ಸಚಿವ ಹುಲ್ಲಪ್ಪ ಯಮನಪ್ಪ ಮೇಟಿ ಅವರ ವಿರುದ್ಧದ ರಾಸಲೀಲೆ ಆರೋಪದ ಸಿ ಡಿ ಪ್ರಕರಣವನ್ನು ಸಿ ಐ ಡಿ ತನಿಖೆಗೆ ವಹಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಪ್ರಕಟಿಸಿದರು.

ತಮ್ಮ ಅಧಿಕೃತ ನಿವಾಸ ಕಾವೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಿದ್ದ ಸಿದ್ದರಾಮಯ್ಯ ಅವರು ಇಡೀ ಪ್ರಕರಣ ಕುರಿತು ಸತ್ಯಾಸತ್ಯತೆಯ ಅರಿಯಲು ಸಮಗ್ರ ತನಿಖೆ ನಡೆಸಿ ಶೀಘ್ರವೇ ವರದಿ ಸಲ್ಲಿಸುವಂತೆ ಸಿ ಐ ಡಿ ಗೆ ಸೂಚಿಸಲಾಗಿದೆ ಎಂದರು.

### ಸ್ವಯಂ ಪ್ರೇರಣೆಯಿಂದ ರಾಜೀನಾಮೆ

ತಮ್ಮ ವಿರುದ್ಧದ ರಾಸಲೀಲೆ ಆರೋಪ ಪ್ರಕರಣವನ್ನು ಹೆಚ್. ವೈ. ಮೇಟಿ ಅವರು ಷಡ್ಯಂತ್ರ ಎಂದು ಬಣ್ಣಿಸಿದ್ದಾರೆ. ಅಲ್ಲದೆ, ಈ ಆರೋಪವನ್ನು ಸಂಪೂರ್ಣವಾಗಿ ಅಲ್ಲಗೆಳೆದಿದ್ದಾರೆ. ಆದರೆ, ಸಿ ಡಿ ಬಿಡುಗಡೆಯಾಗಿರುವ ಹಿನ್ನೆಲೆಯಲ್ಲಿ ಸ್ವಯಂ ಪ್ರೇರಣೆಯಿಂದ ರಾಜೀನಾಮೆ ನೀಡಿದ್ದಾರೆ. ಅಂತೆಯೇ, ಮೇಟಿ ಅವರು ಸಲ್ಲಿಸಿರುವ ರಾಜೀನಾಮೆಯನ್ನು ಅಂಗೀಕರಿಸುವಂತೆ ಶಿಫಾರಸ್ಸು ಮಾಡಿ ರಾಜ್ಯಪಾಲರಿಗೆ ಕಳುಹಿಸಿದ್ದೇನೆ ಎಂದು ಮುಖ್ಯಮಂತ್ರಿ ತಿಳಿಸಿದರು.

### ಮೊದಲು ಗೊತ್ತಿರಲಿಲ್ಲ

ಈ ಪ್ರಕರಣದ ಬಗ್ಗೆ ತಮಗೆ ಮೊದಲೇ ಮಾಹಿತಿ ಇತ್ತು ಎಂಬುದನ್ನು ತಳ್ಳಿಹಾಕಿದ ಸಿದ್ದರಾಮಯ್ಯ ಅವರು ಸಿ ಡಿ ಯನ್ನು ತಾವು ಈವರೆಗೆ ನೋಡಿಯೇ ಇಲ್ಲ ಎಂದೂ ಸ್ಪಷ್ಟಪಡಿಸಿದರು.

*******

ಡಿ ಪಿ ಎಂ